ರಾಜ್ಯದ ಗಡಿ ಪ್ರದೇಶಗಳಲ್ಲಿ ಈ ಬಗ್ಗೆ ತಾಲ್ಲೂಕು ಪಂಚಾಯ್ತಿ ಗ್ರಾಮಪಂಚಾಯ್ತಿ ಸಂಘ ಸಂಸ್ಥೆಗಳಿಂದ ಮನವಿಗಳು ಬಂದಾಗ ಆದ್ಯತೆ ಮೇಲೆ ಪರಿಗಣಿಸಲಾಗುತ್ತದೆ.

ಆ) ಇಲ್ಲ. ಆದರೆ ಗಡಿಭಾಗದ ತಾಲ್ಲೂಕು ಕೇಂದ್ರಗಳಾದ, ಗುಲ್ಬರ್ಗಾ ಜಿಲ್ಲೆಯ ಸೇಡಂನಲ್ಲಿ ರಾಯಚೂರು ಜಿಲ್ಲೆಯ ಸಿಂಧನೂರು, ಲಿಂಗಸುಗೂರು, ಬಳ್ಳಾರಿ ಜಿಲ್ಲೆಯ ಸಿರಿಗುಪ್ಪ ಬೆಳಗಾಂ ಜಿಲ್ಲೆಯ ಹುಕ್ಕೇರಿ, ಅಥಣಿ, ಕೋಲಾರ ಜಿಲ್ಲೆಯ ಮುಳಬಾಗಿಲು, ಬಂಗಾರಪೇಟೆ, ಗೌರಿಬಿದನೂರು, ಚಿಂತಾಮಣಿಗಳಲ್ಲಿ ಬಯಲು ರಂಗಮಂದಿರ ನಿರ್ಮಾಣ ಮಾಡಲಾಗಿದೆ.

ಇ) ಈ ಸಂಬಂಧ ಸ್ಥಳೀಯ ಸಂಘ ಸಂಸ್ಥೆಗಳು, ತಾಲ್ಲೂಕು ಪಂಚಾಯ್ತಿ ಗ್ರಾಮ ಪಂಚಾಯ್ತಿಗಳಿಂದ ಪ್ರಸ್ತಾವನೆಗಳು ಬಂದಲ್ಲಿ ಆದ್ಯತೆ ಮೇರೆಗೆ ಪರಿಗಣಿಸಲಾಗುವುದು.

ಕರ್ನಾಟಕ ಗಡಿಭಾಗದಲ್ಲಿ ಕನ್ನಡ ಅಭಿವೃದ್ಧಿಗಾಗಿ ವಿಶೇಷ ಅನುದಾನ.

೨೮೭೭(೩೬೭೦)

ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ(ಸೇಡಂ): ಸನ್ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕದ ಗಡಿಭಾಗದಲ್ಲಿ ಕನ್ನಡ ಶಿಕ್ಷಣಕ್ಕಾಗಿ ಆಸಕ್ತಿ ವಹಿಸಿ ಕನ್ನಡವೇ ನಮ್ಮ ಭಾಷೆ ಎಂದು ಕನ್ನಡ ನುಡಿ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮವೇನು?

ಆ) ಗುಲ್ಬರ್ಗ ಜಿಲ್ಲೆಯ ಸೇಡಂ ತಾಲ್ಲೂಕು ತೆಲಂಗಾಣ ಆಂಧ್ರ ಗಡಿ ಪ್ರಾಂತ್ಯಕ್ಕೆ ಹೊಂದಿಕೊಂಡಿದ್ದು ತೆಲುಗು ಭಾಷೆಯೇ ಅವರ ಆಡುವ ಭಾಷೆಯಾಗಿರುವ ಈ ಭಾಗದಲ್ಲಿ ಕನ್ನಡ ಭಾಷೆ ಜನಮನವಾಗಲು ಹಾಗೂ ಈ ಭಾಷೆಯೇ ಮಾತೃಭಾಷೆ ಎಂಬಂತೆ ವಾಡಿಕೆಯಲ್ಲಿ ಬರಲು ಸರ್ಕಾರ ವಿಶೇಷವಾಗಿ ಕೈಗೊಂಡಿರುವ ಕಾರ್ಯಕ್ರಮಗಳೇನು?

ಇ) ಈ ಭಾಗದ ಶಾಲೆಗಳಲ್ಲಿ ತರಗತಿಗಳು ಇದ್ದರೂ ಕೋಣೆಗಳ ಕೊರತೆ ಹಾಗೂ ಶಿಕ್ಷಕರ ಕೊರತೆಯಿಂದಾಗಿ ಕನ್ನಡ ಅಭಿವೃದ್ಧಿಯಾಗುತ್ತದೆಯೇ?

ಈ) ಅದಕ್ಕಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ವತಿಯಿಂದ ಈ ಭಾಗದ ಕನ್ನಡ ಅಭಿವೃದ್ಧಿಗಾಗಿ ವಿಶೇಷ ಅನುದಾನವನ್ನು ನೀಡಿ ಅಭಿವೃದ್ಧಿಗೊಳಿಸಲಾಗುವುದೇ?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು):

ಅ) ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಶಿಕ್ಷಣ ಮತ್ತು ಮಾಧ್ಯಮಕ್ಕೆ ಸಂಬಂಧಿಸಿದ ನೀತಿನಿರೂಪಣಾ ವರದಿಯಲ್ಲಿ ಶಿಫಾರಸ್ಸು-ಗಿಜಿರಲ್ಲಿ ಗಡಿನಾಡು ಮತ್ತು ಹೊರನಾಡಿನಲ್ಲಿ ಕನ್ನಡದ ಉಳಿವಿನ ಬಗ್ಗೆ ಕೆಲವು ಸಲಹೆಗಳನ್ನು ನೀಡಿರುತ್ತದೆ. ಸಲಹೆಗಳ ಅನುಷ್ಠಾನದ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಗಡಿ ಸಮಸ್ಯೆಗಳ ಅಧ್ಯಯನಕ್ಕಾಗಿ ಸನ್ಮಾನ್ಯ ಶ್ರೀ ವಾಟಾಳ್ ನಾಗರಾಜ್‌ರವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಏಕ ಸದಸ್ಯ ಆಯೋಗವು ತನ್ನ ಮಧ್ಯಂತರ ವರದಿಯನ್ನು ಸಲ್ಲಿಸಿರುತ್ತದೆ. ಈ ವರದಿಯ ಶಿಫಾರಸ್ಸುಗಳ ಪರಿಶೀಲನೆ ಕಾರ್ಯವನ್ನು ಹಾಗೂ ಗಡಿನಾಡು ಕನ್ನಡಿಗರ ಸಮಸ್ಯೆಗಳ ಅಧ್ಯಯನ ಕಾರ್ಯವನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ವಹಿಸಲಾಗಿರುತ್ತದೆ. ಈ ದಿಶೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಈ ವಿಷಯವನ್ನು ಒಳಗೊಂಡಂತೆ ಸಮಗ್ರ ಭಾಷೆ ಕುರಿತು ಪ್ರಶ್ನಾವಳಿ ತಯಾರಿಸಿ ಗಡಿ ಭಾಗದ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಮತ್ತು ತಾಲ್ಲೂಕಿನ ತಹಶೀಲ್ದಾರರವರಿಗೆ ಸಮಗ್ರ ಮಾಹಿತಿ ಒದಗಿಸುವಂತೆ ಕಳುಹಿಸಿರುತ್ತದೆ.

ಇ) ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಒಟ್ಟಾರೆ ಗಡಿಭಾಗದಲ್ಲಿನ ಶಾಲೆಗಳ ಸ್ಥಿತಿಗತಿ ಬಗ್ಗೆ ಅಂದರೆ ಶಾಲೆಗಳ ಕೊಠಡಿಗಳ ಮತ್ತು ಶಿಕ್ಷಕರ ಕೊರತೆಯ ಬಗ್ಗೆ ಸ್ಪಷ್ಟ ಚಿತ್ರ ಪಡೆದುಕೊಳ್ಳಲು ಪ್ರಶ್ನಾವಳಿಯೊಂದನ್ನು ಸಿದ್ಧಪಡಿಸಿದ್ದು ಅದರಲ್ಲಿ ಬೇರೆ ವಿಷಯಗಳ ಜೊತೆಗೆ ಈ ಬಗ್ಗೆಯು ಅವಶ್ಯಕ ಮಾಹಿತಿಯನ್ನು ಜಿಲ್ಲಾಧಿಕಾರಿಗಳಿಂದ ತಹಶೀಲ್ದಾರರಿಂದ ಕೋರಲಾಗಿದೆ.

ಈ) ಕನ್ನ ಅಭಿವೃದ್ಧಿ ಪ್ರಾಧಿಕಾರದ ಅಂತಿಮ ವರದಿ ಬಂದ ನಂತರ ಅದು ನೀಡುವ ಶಿಫಾರಸ್ಸುಗಳ ಅನುಷ್ಠಾನದ ಬಗ್ಗೆ ಪರಿಶೀಲಿಸಲಾಗುವುದು.

ಬಸವನಬಾಗೇವಾಡಿ ಕ್ಷೇತ್ರದ ಮೀನು ಕೃಷಿಕರಿಗೆ ಸೌಲಭ್ಯ.

೨೮೮೦(೩೬೬೫)

ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ(ಬಸವನಬಾಗೇವಾಡಿ): ಮಾನ್ಯ ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವನ ಬಾಗೇವಾಡಿ ಮತಕ್ಷೇತ್ರದಲ್ಲಿ ಮೀನುಗಾರಿಕಾ ಸೌಲಭ್ಯಕ್ಕಾಗಿ ಅಭಿವೃದ್ಧಿ